**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ, ಹೆಗ್ಗಡದೇವನಕೋಟೆ**

# ಸಿ.ಸಿ.ನಂ.526/2019

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಸಿದ್ದರಾಮೇಗೌಡ | ಸಿ.ಡಬ್ಲ್ಯೂ-5 |
| ತಂದೆಯ ಹೆಸರು / ಗಂಡನ ಹೆಸರು | : | ರಾಮೇಗೌಡ | ಪಿ.ಡಬ್ಲ್ಯೂ-4 |
| ವಯಸ್ಸು | : | 65 ವರ್ಷ | - |
| ಉದ್ಯೋಗ | : | ವ್ಯವಸಾಯ | ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ **15.02.2024.** |
| ವಾಸಸ್ಥಳ | : | ಕುಂದೂರು ಗ್ರಾಮ | - |

**ಮುಖ್ಯ ವಿಚಾರಣೆಃ ಎಪಿಪಿ ರವರಿಂದಃ**

ಆರೋಪಿ ಗೊತ್ತು. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಿ ಅದರಲ್ಲಿರುವ ಸಹಿಯು ತಮ್ಮದೇ ಎಂದು ನೋಡಿ ಗುರುತಿಸುವಂತೆ ಹೇಳಿದ್ದು ಸಾಕ್ಷಿಯು ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ**-8(ಬಿ)** ಎಂದು ಗುರುತಿಸಲಾಯಿತು. ಅಮಾನತ್ತು ಮಹಜರ್ ನಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಅಮಾನತ್ತು ಮಹಜರ್ ಕ್ರಮ ಜರುಗಿಸಿಲ್ಲ, ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ, ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**ಪಾಟೀ ಸವಾಲುಃ ಎಪಿಪಿ ರವರಿಂದಃ**

ದಿಃ 21.01.2019 ರಂದು ಸರಗೂರು ಪೊಲೀಸ್ ಠಾಣೆಯಲ್ಲಿ ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಸರಗೂರು ಪೊಲೀಸರು ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿ ಆರೋಪಿಯ ಬಾಬ್ತು 90 ಎಂ.ಎಲ್ ನ ವಿಂಡ್ಸರ್ ಡೀಲಕ್ಸ್ ವಿಸ್ಕಿಯ 76 ಪೌಚುಗಳು , ಒಂದು ಪ್ಲಾಸ್ಟಿಕ್ ಚೀಲ ಹಾಗೂ ಕೆಎ 45 ವೈ 8734 ನೊಂದಣಿಯುಳ್ಳ ಒಂದು ಹೀರೋ ಸ್ಪೆಂಡರ್ ಪ್ಲಸ್ ಬೈಕನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರ ಸರಿಯಲ್ಲ. ನಾನು ಮಹಜರಿಗೆ ಸರಗೂರು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಘಟನೆ ನಡೆದ ದಿನ ಚಾಸಾ-1 ರವರ ಜೊತೆ ನಾನು ದಾಳಿಯಲ್ಲಿ ಭಾಗವಹಿಸಿದ್ದು ನನ್ನ ಸಮಕ್ಷಮ ಆರೋಪಿಯನ್ನು ದಸ್ತಗಿರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿ ಕೇಳಿಕೊಂಡ **ನಿ.ಪಿ-10** ರಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸಾ ಸ ಇ ಒ.,**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**